**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಇವರ ನಿಯಮ 330 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ:**

ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ 2023-24ನೇ ಸಾಲಿನಿಂದ ಹೊಸದಾಗಿ ಚಾಮರಾಜನಗರ, ಹಾಸನ, ಮಂಡ್ಯ ವಿಶ್ವವಿದ್ಯಾನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿರುವುದು ಸರಿಯಷ್ಟೆ. ಹೊಸದಾಗಿ ಮೂರು ವಿಶ್ವವಿದ್ಯಾನಿಲಯಗಳು ಪ್ರಾರಂಭಗೊಂಡ ಸಾಲಿನಿಂದ ಸದರಿ ವಿ.ವಿ.ಯ ವ್ಯಾಪ್ತಿಯಲ್ಲಿನ ವಿದ್ಯಾರ್ಥಿಗಳು ತಾವು ಇಚ್ಛಿಸಿದ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡಲು ಮೈಸೂರು ವಿಶ್ವವಿದ್ಯಾನಿಲಯಗಳಲ್ಲಿ ಪ್ರವೇಶ ಪಡೆಯಲು ನಿಯಮಗಳ ತೊಡಕುಗಳಿಂದ ಉಂಟಾಗಿರುವ ಸಮಸ್ಯೆ ಕುರಿತು ಮಾನ್ಯ ಉನ್ನತ ಶಿಕ್ಷಣ ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಸರ್ಕಾರದ ಉತ್ತರ:**

ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಾತಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಇರುವ ಸಂಖ್ಯಾ ಮಿತಿಗೆ ಮೈಸೂರು ವಿಶ್ವವಿದ್ಯಾಲಯದ ಹೊರಗಿನ - ಕರ್ನಾಟಕ ರಾಜ್ಯದ ಒಳಗಿರುವ ವಿಶ್ವವಿದ್ಯಾನಿಲಯಗಳ ವಿದ್ಯಾರ್ಥಿಗಳಿಗೆ ಶೇ. 10% ರಷ್ಟು ಸೀಟುಗಳು ಮತ್ತು ಕರ್ನಾಟಕ ರಾಜ್ಯದ ಹೊರಗಿನ ವಿಶ್ವವಿದ್ಯಾನಿಲಯಗಳ ವಿದ್ಯಾರ್ಥಿಗಳಿಗೆ ಶೇ. 10% ರಷ್ಟು ಸೀಟುಗಳನ್ನು ಹೆಚ್ಚುವರಿಯಾಗಿ ಪ್ರವೇಶಾತಿಗೆ ಅವಕಾಶ ಕಲ್ಪಿಸಿದೆ.

ಹೊಸ ವಿಶ್ವವಿದ್ಯಾನಿಲಯಗಳು 2023-24 ನೇ ಶೈಕ್ಷಣಿಕ ಸಾಲಿನಿಂದ ಪ್ರಥಮ ವರ್ಷದ ಸ್ನಾತಕ ಕೋರ್ಸುಗಳನ್ನು ಪ್ರಾರಂಭಿಸಲಿದ್ದು, ಹಾಲಿ ವ್ಯಾಸಂಗ ಮಾಡುತ್ತಿರುವ ಒಂದು, ಎರಡು ಮತ್ತು ಮೂರನೇ ವರ್ಷದ ಪದವಿ ವಿದ್ಯಾರ್ಥಿಗಳಿಗೆ ಮೈಸೂರು ವಿಶ್ವವಿದ್ಯಾನಿಲಯವೇ ಪದವಿ ಪ್ರಮಾಣ ಪತ್ರಗಳನ್ನು ನೀಡಲಿದ್ದು, ಅಲ್ಲಿಯವರೆಗೆ ಆ ವಿದ್ಯಾರ್ಥಿಗಳು ಮೈಸೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳೇ ಆಗಿರುತ್ತಾರೆ. ಮುಂದುವರೆದು, 2025-26ನೇ ಶೈಕ್ಷಣಿಕ ಸಾಲಿನವರೆಗೆ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಕೋರ್ಸುಗಳಿಗೆ ಪ್ರವೇಶಾತಿ ಪಡೆಯಲು ಯಾವುದೇ ತೊಡಕುಗಳು ಉಂಟಾಗುವುದಿಲ್ಲ.

*********************

ಸಂಖ್ಯೆ: ಇಡಿ 12 ಯುಎಂವಿ 2023

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು